# National
# Kannada
# 10.08.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ವಯನಾಡು ಭೂಕುಸಿತ ಪ್ರದೇಶಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ಪರಿಹಾರ ಕಾರ್ಯಕ್ಕೆ ಬೆಂಬಲ ನೀಡುವುದಾಗಿ ಕೇರಳ ಸರ್ಕಾರಕ್ಕೆ ಭರವಸೆ

೨. ಬ್ಯಾಂಕಿಂಗ್ ಕಾನೂನು ತಿದ್ದುಪಡಿ ಮಸೂದೆ ಸಹಕಾರ ಕ್ಷೇತ್ರಕ್ಕೆ ಸಹಕಾರಿ- ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

೩. ದೇಶದಲ್ಲಿ ಎಥೆನಾಲ್ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡುವಂತೆ ಕೇಂದ್ರ ಸಚಿವ ಅಮಿತ್ ಶಾ ಕರೆ

೪. ಪ್ಯಾರಿಸ್ ಒಲಿಂಪಿಕ್ಸ್; ತವರಿಗೆ ಹಿಂದಿರುಗಿದ ಭಾರತದ ಹಾಕಿ ತಂಡ- ನವದೆಹಲಿಯಲ್ಲಿ ಆಟಗಾರರಿಗೆ ಭವ್ಯ ಸ್ವಾಗತ

**<><*<><>*><>**

ಭೂಕುಸಿತದಿಂದ ತತ್ತರಿಸಿರುವ ಕೇರಳದ ವಯನಾಡಿನ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ದುರಂತ ಪೀಡಿತ ಪ್ರದೇಶಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸಿದರು. ಭಾರತೀಯ ವಾಯುಪಡೆಯ ಹೆಲಿಕಾಪ್ಟರ್‌ನಲ್ಲಿ ಚೂರಲ್‌ಮಲ, ಮುಂಡಕೈ ಮತ್ತು ಪುಂಚಿರಿಮಟ್ಟಮ್ ಗ್ರಾಮಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸಿದರು. ಬಳಿಕ ಮೇಪ್ಪಾಡಿಯಾ ಸೈಂಟ್ ಜೋಸೆಫ್ ಶಾಲೆಯಲ್ಲಿ ನಿರಾಶ್ರಿತ ಶಿಬಿರಕ್ಕೆ ಭೇಟಿ ನೀಡಿ ಭೂಕುಸಿತದಿಂದ ಬದುಕುಳಿದವರೊಂದಿಗೆ ಸಂವಾದ ನಡೆಸಿದರು. ಹೆತ್ತವರನ್ನು ಕಳೆದುಕೊಂಡ ವಿದ್ಯಾರ್ಥಿಗಳಿಗೆ ಇದೇ ವೇಳೆ ಸಾಂತ್ವಾನ ಹೇಳಿದರು. ಬಳಿಕ ಮೆಪ್ಪಾಡಿಯಾ ವಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ, ಗಾಯಾಗಳೊಂದಿಗೆ ಮಾತುಕತೆ ನಡೆಸಿದರು. ಚೂರಲ್‌ಮಲಾದಲ್ಲಿ ಭಾರತೀಯ ಸೇನೆ ನಿರ್ಮಿಸಿರುವ ಬೈಲಿ ಸೇತುವೆಗೂ ಭೇಟಿ ನೀಡಿದರು. ಸುಮಾರು ೫೦ ನಿಮಿಷಗಳ ಕಾಲ ಚೂರಲ್‌ಮಲಾದಲ್ಲಿದ್ದ ಪ್ರಧಾನಿ, ಸೇನೆ, ವಿಶೇಷ ಕಾರ್ಯಾಚರಣೆ ಪಡೆ ಹಾಗೂ ಎನ್‌ಡಿಆರ್‌ಎಫ್ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದರು. ಭೂಕುಸಿತ ದುರಂತಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ, ಕೇರಳ ಸರ್ಕಾರದೊಂದಿಗೆ ಪರಿಶೀಲನಾ ಸಭೆ ನಡೆಸಿದರು. ಬಳಿಕ ಮಾತನಾಡಿದ ಪ್ರಧಾನಿ, ಸಂತ್ರಸ್ತರ ಜೊತೆ ಇಡೀ ದೇಶ ಹಾಗೂ ಕೇಂದ್ರ ಸರ್ಕಾರ ನಿಂತಿದ್ದು, ಪರಿಹಾರ ಕಾರ್ಯಗಳಿಗೆ ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡುವುದಾಗಿ ರಾಜ್ಯ ಸರ್ಕಾರಕ್ಕೆ ಭರವಸೆ ನೀಡಿದರು. ಸಂತ್ರಸ್ತರ ಭವಿಷ್ಯ ಮತ್ತು ಕನಸುಗಳನ್ನು ಮರು ನಿರ್ಮಾಣಕ್ಕೆ ಸಹಾಯ ಮಾಡುವುದು ಸಮಾಜದ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಭೂಕುಸಿತದಿಂದ ಸಂತ್ರಸ್ತರಾದ ಮಕ್ಕಳ ಭವಿಷ್ಯಕ್ಕಾಗಿ ದೀರ್ಘಾವಧಿ ಯೋಜನೆ ರೂಪಿಸುವಂತೆ ರಾಜ್ಯ ಸರ್ಕಾರಕ್ಕೆ ಸಲಹೆ ನೀಡಿದರು. ಸಭೆಯಲ್ಲಿ ಕೇರಳ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್, ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಸೇರಿದಂತೆ ಸಚಿವರು, ಅಧಿಕಾರಿಗಳು ಉಪಸ್ಥಿತರಿದ್ದರು.

**<><*<><>*><>**

ಬ್ಯಾಂಕ್‌ಗಳು ಕೋರ್ ಬ್ಯಾಂಕಿಂಗ್‌ಗೆ ಒತ್ತು ನೀಡುವ ಅಗತ್ಯತೆಯನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿಂದು ಭಾರತೀಯ ರಿಸರ್ವ್ ಬ್ಯಾಂಕ್ ನಿರ್ದೇಶಕರ ಜೊತೆ ಬಜೆಟ್ ನಂತರದ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಸರ್ಕಾರ ತರುತ್ತಿರುವ ಬ್ಯಾಂಕಿಂಗ್ ನಿಯಮಗಳ ತಿದ್ದುಪಡಿಗಳು ಬಹು ನಿರೀಕ್ಷಿತವಾಗಿವೆ ಎಂದು ಹೇಳಿದರು. ಈ ತಿದ್ದುಪಡಿಗಳು ಸಹಕಾರಿ ಬ್ಯಾಂಕಿಂಗ್ ಕ್ಷೇತ್ರಕ್ಕೆ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ. ಹಣಕಾಸು ಮಸೂದೆ ಅಂಗೀಕರಿಸಿದ ನಂತರ ನಡೆದ ಈ ಸಭೆ ಮಹತ್ವ ಪಡೆದುಕೊಂಡಿದೆ. ಬ್ಯಾಂಕಿಂಗ್ ಕಾನೂನುಗಳು ತಿದ್ದುಪಡಿ ಮಸೂದೆ-೨೦೨೪ ಅನ್ನು ನಿನ್ನೆ ಲೋಕಸಭೆಯಲ್ಲಿ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌದರಿ ಮಂಡಿಸಿದ್ದರು. ಭಾರತೀಯ ರಿಸರ್ವ್ ಬ್ಯಾಂಕ್ ಕಾಯ್ದೆ-೧೯೩೪, ಬ್ಯಾಂಕಿಂಗ್ ನಿಯಂತ್ರಣಾ ಕಾಯ್ದೆ-೧೯೪೯, ಸ್ಟೇಟ್‌ಬ್ಯಾಂಕ್ ಇಂಡಿಯಾ ಕಾಯ್ದೆ-೧೯೫೫, ಬ್ಯಾಂಕಿಂಗ್ ಕಂಪನಿಗಳ ಕಾಯ್ದೆ-೧೯೭೦ ಇವುಗಳಿಗೆ ಈ ಮಸೂದೆಯಲ್ಲಿ ತಿದ್ದುಪಡಿ ತರಲು ನಿರ್ಧರಿಸಲಾಗಿದೆ. ಸಭೆಯಲ್ಲಿ ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌದರಿ ಮತ್ತು ಆರ್‌ಬಿಐ ಗವರ್ನರ್ ಶಕ್ತಿಕಾಂತ್‌ದಾಸ್ ಉಪಸ್ಥಿತಿರಿದ್ದರು.

<><*<><>*><>

ಕಬ್ಬಿನ ಜೊತೆಗೆ ಮೆಕ್ಕೆಜೋಳ, ಅಕ್ಕಿ ನುಚ್ಚು, ಕೊಳೆತ ಹಣ್ಣುಗಳು ಮತ್ತು ಬಿದಿರು ಬಳಸಿಕೊಂಡು ದೇಶದಲ್ಲಿ ಎಥೆನಾಲ್ ಉತ್ಪಾದನೆಗೆ ಒತ್ತು ನೀಡುವಂತೆ ಕೇಂದ್ರ ಸಹಕಾರ ಮತ್ತು ಗೃಹ ಸಚಿವ ಅಮಿತ್ ಶಾ ಕರೆ ನೀಡಿದ್ದಾರೆ. ನವದೆಹಲಿಯಲ್ಲಿಂದು ನಡೆದ ರಾಷ್ಟ್ರೀಯ ಸಕ್ಕರೆ ಸಹಕಾರ ಸಮ್ಮೇಳನದಲ್ಲಿ ಮಾತನಾಡಿದ ಅವರು, ಎಥೆನಾಲ್ ಉತ್ಪಾದನೆಯು ಲಾಭದಾಯಕವಾಗಿದ್ದು, ಭವಿಷ್ಯದಲ್ಲಿ ಸಾವಿರ ಕೋಟಿ ಲೀಟರ್ ಎಥೆನಾಲ್ ಅಗತ್ಯವಿದೆ ಎಂದು ತಿಳಿಸಿದ್ದಾರೆ. ೨೦೩೦ ರ ವೇಳೆಗೆ ಕೇಂದ್ರ ಸರ್ಕಾರವು, ಪೆಟ್ರೋಲ್‌ನಲ್ಲಿ ಶೇಕಡ ೨೦ ರಷ್ಟು ಎಥೆನಾಲ್ ಮಿಶ್ರಣ ಮಾಡುವ ಗುರಿ ಹೊಂದಿದೆ ಎಂದು ಹೇಳಿದರು. ಅಲ್ಲದೆ, ಎಥೆನಾಲ್ ರಫ್ತಿಗೆ ಅವಕಾಶ ನೀಡುವ ಮೂಲಕ ರೈತರು ಪ್ರಯೋಜನ ಪಡೆಯುವಂತಾಗಬೇಕು ಎಂದು ಪ್ರತಿಪಾದಿಸಿದರು.

<><*<><>*><>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮೂರು ದಿನಗಳ ಮಾಲ್ಡೀವ್ಸ್ ಪ್ರವಾಸ ಕೈಗೊಂಡಿದ್ದಾರೆ. ಮಾಲ್ಡೀವ್ಸ್ ನೊಂದಿಗಿನ ಭಾರತದ ಪಾಲುದಾರಿಕೆ, ದ್ವಿಪಕ್ಷೀಯ ಸಂಬಂಧ ಮತ್ತು ಉಭಯ ದೇಶಗಳ ನಡುವಿನ ವಹಿವಾಟು ಸೇರಿದಂತೆ ವಿವಿಧ ವಿಷಯಗಳ ಕುರಿತು ಮಾಲ್ಡೀವ್ಸ್ ವಿದೇಶಾಂಗ ಸಚಿವ ಮೂಸಾ ಜಮೀರ್ ಅವರೊಂದಿಗೆ ಚರ್ಚೆ ನಡೆಸಿದರು. ಬಳಿಕ ಡಾ.ಎಸ್.ಜೈಶಂಕರ್, ದ್ವಿಪಕ್ಷೀಯ ಸಂಬಂಧ ಮತ್ತು ಪ್ರಾದೇಶಿಕ ಭದ್ರತೆ, ಡಿಜಿಟಲ್ ಸಹಕಾರದಲ್ಲಿ ಉಭಯ ರಾಷ್ಟ್ರಗಳು ತಮ್ಮದೇ ಆದ ಕಾರ್ಯಸೂಚಿ ಹೊಂದಿದ್ದು, ಇದಕ್ಕೆ ಅನುಗುಣವಾಗಿ ಮುನ್ನಡೆಯಲಿವೆ ಎಂದು ತಿಳಿಸಿದರು. ಇದೇ ವೇಳೆ ಮಾಲ್ಡೀವ್ಸ್ ವಿದೇಶಾಂಗ ಸಚಿವ ಮೂಸಾ ಜಮೀರ್, ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಪರಿಚಯಿಸುವ ಭಾರತದ ಬದ್ಧತೆಯನ್ನು ಶ್ಲಾಘಿಸಿದರು. ಬಳಿಕ, ಸಚಿವ ಜೈಶಂಕರ್, ಮಾಲ್ಡೀವ್ಸ್ ರಕ್ಷಣಾ ಸಚಿವ ಮಹಮ್ಮದ್ ಘಸಾನ್ ಮೌಮೂನ್ ಅವರೊಂದಿಗೆ ಮಾತುಕತೆ ನಡೆಸಿದರು.

<><*<><>*><>

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ, ಕೇಂದ್ರ ಸಚಿವ ಜೆ.ಪಿ.ನಡ್ಡಾ, ಗುಜರಾತ್‌ನ ರಾಜ್‌ಕೋಟ್‌ನಲ್ಲಿಂದು ತಿರಂಗಾ ಯಾತ್ರೆಗೆ ಚಾಲನೆ ನೀಡಿದರು. ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಜೆ.ಪಿ.ನಡ್ಡಾ, ಭಾರತದ ಅಭಿವೃದ್ಧಿಯಲ್ಲಿ ಗುಜರಾತ್ ಕೊಡುಗೆ ಅಪಾರ ಎಂದು ಹೇಳಿದರು. ಈ ಯಾತ್ರೆ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿಯಾಗಿ ಆಗಸ್ಟ್ ೧೫ರ ವರೆಗೆ ನಡೆಯುವ 'ಹರ್ ಘರ್ ತಿರಂಗಾ' ರಾಷ್ಟ್ರವ್ಯಾಪಿ ಅಭಿಯಾನಕ್ಕೆ ನಾಂದಿ ಹಾಡಿದೆ. ಆಗಸ್ಟ್ ೧೩ ರಂದು ಅಹಮದಾಬಾದ್‌ನಲ್ಲಿ ತಿರಂಗಾ ಯಾತ್ರೆಯ ಬೃಹತ್ ಸಮಾವೇಶ ನಡೆಯಲಿದ್ದು, ಅಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಲ್ಗೊಳ್ಳಲಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ನವದೆಹಲಿಯಲ್ಲಿ ೧೦೯ಕ್ಕೂ ಹೆಚ್ಚು ಇಳುವರಿ ನೀಡುವ ಹವಾಮಾನ ನಿರೋಧಕ ಮತ್ತು ಜೈವಿಕ ಬಲವರ್ಧಿತ ಕೃಷಿ ಸಂಬಂಧಿತ ತಳಿಗಳನ್ನು ಬಿಡುಗಡೆ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿಯವರು, ರೈತರು ಮತ್ತು ವಿಜ್ಞಾನಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ೩೪ ಕೃಷಿ ಬೆಳೆಗಳು, ೨೭ ತೋಟಗಾರಿಕಾ ಬೆಳೆಗಳನ್ನು ಒಳಗೊಂಡಿರುವ ೬೧ ಬೆಳೆಗಳನ್ನು ಬಿಡುಗಡೆ ಮಾಡಲಿದ್ದು, ಇದರಲ್ಲಿ ೧೦೯ ಪ್ರಬೇಧಗಳು ಸೇರಿವೆ ಎಂದು ಪ್ರಧಾನಮಂತ್ರಿ ಕಾರ್ಯಾಲಯ ಹೇಳಿಕೆಯಲ್ಲಿ ತಿಳಿಸಿದೆ. ಕೃಷಿ ಬೆಳೆಗಳಲ್ಲಿ ರಾಗಿ, ಮೇವು, ಎಣ್ಣೆ-ಕಾಳುಗಳು, ದ್ವಿದಳ ಧಾನ್ಯಗಳು, ಕಬ್ಬು, ಹತ್ತಿ, ನಾರು ಮತ್ತು ಇತರೆ ಧಾನ್ಯಗಳ ಬೀಜಗಳನ್ನು ಬಿಡುಗಡೆ ಮಾಡಲಿದ್ದಾರೆ. ತೋಟಗಾರಿಕೆ ಬೆಳೆಗಳಲ್ಲಿ ವಿವಿಧ ರೀತಿಯ ಹಣ್ಣುಗಳು, ತರಕಾರಿಗಳು, ಗೆಡ್ಡೆಗಳು, ಮಸಾಲೆಗಳು ಮತ್ತು ಔಷಧೀಯ ಸಸ್ಯಗಳನ್ನು ಒಳಗೊಂಡಿವೆ.

<><*<><>*><>

ನೇಪಾಳ ವಿದೇಶಾಂಗ ಕಾರ್ಯದರ್ಶಿ ಸೇವಾ ಲಮ್ಸಾಲ್ ಆಹ್ವಾನದ ಮೇರೆಗೆ ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಾಳೆಯಿಂದ ನೇಪಾಳಕ್ಕೆ ಎರಡು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ವಿದೇಶಾಂಗ ಕಾರ್ಯದರ್ಶಿಗಳ ಈ ಭೇಟಿಯು ಭಾರತ-ನೇಪಾಳ ದ್ವಿಪಕ್ಷೀಯ ಬಾಂಧವ್ಯವನ್ನು ಮತ್ತಷ್ಟು ಹೆಚ್ಚಿಸಲು ಸಹಕಾರಿಯಾಗಲಿದೆ. ನೇಪಾಳದಲ್ಲಿ ಪ್ರಮುಖ ಯೋಜನೆಗಳ ಸಹಕಾರದೊಂದಿಗೆ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧ ಇತ್ತೀಚಿನ ವರ್ಷಗಳಲ್ಲಿ ಬಲಗೊಂಡಿದೆ.

<><*<><>*><>

ಪ್ರಸಾರ ಭಾರತಿ ಅಧ್ಯಕ್ಷರಾದ ನವನೀತ್ ಕುಮಾರ್ ಸೆಹಗಲ್ ಇಂದು ಮುಂಬೈ ಆಕಾಶವಾಣಿ ಕೇಂದ್ರಕ್ಕೆ ಭೇಟಿ ನೀಡಿದರು. ಎರಡು ದಿನಗಳ ಮುಂಬೈ ಪ್ರವಾಸದಲ್ಲಿರುವ ಅವರು ಆಕಾಶಾವಾಣಿ ಮತ್ತು ದೂರದರ್ಶನ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಅಧಿಕಾರಿಗಳು ಕಾರ್ಯಕ್ರಮ ಮಾಡುವಾಗ ಕೇಳುಗರ ಹಿತವನ್ನು ಗಮನದಲ್ಲಿಟ್ಟುಕೊಳ್ಳಬೇಕು ಎಂದು ಸಲಹೆ ನೀಡಿದರು. ಮಹಿಳೆಯರು, ಯುವಕರು, ರೈತರಿಗಾಗಿ ಕಾರ್ಯಕ್ರಮ ನಡೆಸುವಂತೆ ಸೂಚಿಸಿದರು.

<><*<><>*><>

ಆಗಸ್ಟ್ ೧೫ ರಂದು ದೇಶ ೭೮ನೇ ಸ್ವಾತಂತ್ರ್ಯೋತ್ಸವ ದಿನವನ್ನು ಆಚರಿಸುತ್ತಿದೆ. ಈ ಬಾರಿ ದೇಶದ ವಿವಿಧೆಡೆಯಿಂದ ಮಹಿಳೆಯರು, ಯುವಕರು, ಕೃಷಿಕರು ಮತ್ತು ಬುಡಕಟ್ಟು ಜನಾಂಗ ಸೇರಿದಂತೆ ಸುಮಾರು ೬ ಸಾವಿರ ವಿಶೇಷ ವಲಯಗಳಿಂದ ಸಾಧಕರನ್ನು ಆಹ್ವಾನಿಸಲಾಗಿದೆ. ಕರ್ನಾಟಕದಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಖಿ-ಒನ್ ಸ್ಟಾಪ್ ಸೆಂಟರ್ ಘಟಕದ ಆಡಳಿತಾಧಿಕಾರಿ ಅಮಿತಾ ಅತ್ರೇಶ್ ಅವರನ್ನು ಆಹ್ವಾನಿಸಲಾಗಿದೆ. ಸಖಿ ಕೇಂದ್ರವು ಕರ್ನಾಟಕದಲ್ಲಿ ಮಹಿಳಾ ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಐದು ಸೇವೆ ಒದಗಿಸುತ್ತಿದೆ. ಆಪ್ತ ಸಮಾಲೋಚನೆ, ಪೊಲೀಸ್ ನೆರವು, ಕಾನೂನು ಸೇವೆ, ವೈದ್ಯಕೀಯ ನೆರವು ಹಾಗೂ ಐದು ದಿನಗಳ ತಾತ್ಕಾಲಿಕ ಆಶ್ರಯ ನೀಡುತ್ತಿದೆ. ಆಕಾಶವಾಣಿ ಜೊತೆ ಮಾತನಾಡಿದ ಅಮಿತಾ ಅತ್ರೇಶ್, ಈ ಬಗ್ಗೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ: ಅಮಿತಾ ಅತ್ರೇಶ್

**<><*<><>*><>**

ಬಾಂಗ್ಲಾದೇಶದಲ್ಲಿ ಅವಾಮಿ ಲೀಗ್ ಪಕ್ಷದ ಸರ್ಕಾರ ಪದಚ್ಯುತಿಗೊಂಡ ನಂತರ ಮಧ್ಯಂತರ ಸರ್ಕಾರ ಅಸ್ತಿತ್ವಕ್ಕೆ ಬಂದಿದ್ದು, ಮಹಮ್ಮದ್ ಯೂನುಸ್ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಈ ನಡುವೆ ಸುಪ್ರೀಂಕೋರ್ಟ್ ಮುಖ್ಯನ್ಯಾಯಮೂರ್ತಿ ಒಬೈದುಲ್ ಹಸನ್ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ವಿದ್ಯಾರ್ಥಿಗಳು, ವಕೀಲರು ಮತ್ತು ನಾಗರಿಕರು ಹಸನ್ ರಾಜೀನಾಮೆ ನೀಡಬೇಕು, ಇಲ್ಲವಾದರೆ ಅವರ ನಿವಾಸಕ್ಕೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿದ್ದರು. ಈ ನಡುವೆ ನೂತನವಾಗಿ ನೇಮಕಗೊಂಡ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮೈನುಲ್ ಇಸ್ಲಾಮ್ ೨೪ ಗಂಟೆಗಳ ಒಳಗೆ ಕೆಲಸಕ್ಕೆ ಹಾಜರಾಗುವಂತೆ ಪೊಲೀಸ್ ಸಿಬ್ಬಂದಿಗೆ ಆದೇಶ ನೀಡಿದ್ದಾರೆ.

**<><*<><>*><>**

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಇಂದು ಮಹಿಳೆಯರ ೭೬ ಕೆ.ಜಿ. ಫ್ರಿಸ್ಟೈಲ್ ಕುಸ್ತಿ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ರಿತಿಕಾ ಹೂಡಾ ಕಿರ್ಗಿಸ್ತಾನದ ಅಗ್ರ ಶ್ರೇಯಾಂಕದ ಐಫೆರಿ ಮೆಡೆಟ್ ಕೈಸಿ ವಿರುದ್ಧ ಸೋಲನುಭವಿಸಿದ್ದಾರೆ. ಇದಕ್ಕೂ ಮೊದಲು ರೀತಿಕಾ ಹೂಡಾ ಯುರೋಪಿಯನ್ ಚಾಂಪಿಯನ್‌ಶಿಪ್‌ನಲ್ಲಿ ಪದಕ ವಿಜೇತ ಹಂಗೇರಿಯ ಬರ್ನಾಡೆಟ್ ನಾಗಿ ಅವರನ್ನು ೧೨-೨ ಅಂಕಗಳಿಂದ ಸೋಲಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದರು. ಗಾಲ್ಫ್‌ನ ವೈಯಕ್ತಿಕ ವಿಭಾಗದಲ್ಲಿ ಅದಿತಿ ಅಶೋಕ್ ಮತ್ತು ದೀಕ್ಷಾ ದಾಗರ್ ಅವರು, ಕ್ರಮವಾಗಿ ೩೩ ಹಾಗೂ ೫೧ ಸ್ಥಾನದೊಂದಿಗೆ ಆಟ ಕೊನೆಗೊಳಿಸಿದ್ದಾರೆ. ಈ ನಡುವೆ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದು, ತವರಿಗೆ ಹಿಂದಿರುಗಿರುವ ಭಾರತ ಹಾಕಿ ತಂಡಕ್ಕೆ ನವದೆಹಲಿಯ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭವ್ಯ ಸ್ವಾಗತ ನೀಡಲಾಯಿತು. ಕೇಂದ್ರ ಸಚಿವ ಮನ್ಸೂಖ್ ಮಾಂಡವೀಯ ಒಲಿಂಪಿಕ್ಸ್‌ನಲ್ಲಿ ಅಸಾಧಾರಣ ಪ್ರದರ್ಶನ ನೀಡಿದ ಭಾರತೀಯ ಪುರುಷರ ಹಾಕಿ ತಂಡಕ್ಕೆ ಸಾಮಾಜಿಕ ಜಾಲತಾಣದಲ್ಲಿ ಅಭಿನಂದನೆ ಸಲ್ಲಿಸಿದ್ದಾರೆ. ಲಕ್ಷಾಂತರ ಯುವ ಕ್ರೀಡಾಪಟುಗಳಿಗೆ ಅವರ ಕನಸುಗಳನ್ನು ಮುಂದುವರಿಸಲು ಸ್ಫೂರ್ತಿ ನೀಡಿದ್ದೀರಿ ಎಂದು ತಿಳಿಸಿದ್ದಾರೆ. ಇಲ್ಲಿಯವರೆಗೆ ಭಾರತ ಒಂದು ಬೆಳ್ಳಿ ಮತ್ತು ೫ ಕಂಚಿನ ಪದಕ ಸೇರಿದಂತೆ ೬ ಪದಕಗಳನ್ನು ಗೆದ್ದಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**